STD

# ಕರ್ನಾಟಕವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 695 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23.12.2022 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಗೊಲ್ಲ ಸಮುದಾಯವು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ಅತೀ ಹಿಂದುಳಿದ ವರ್ಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಗೊಲ್ಲ ಸಮುದಾಯದ ಅಭಿವೃದ್ಧಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ಹಾಗೂ ಕೈಗೊಂಡಿರುವ ಕ್ರಮಗಳಾವುವು: (ವಿವರ ನೀಡುವುದು) | ಬಂದಿರುತ್ತದೆ.<br><br>ಗೊಲ್ಲ ಸಮುದಾಯವು ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಸೇರಿರುತ್ತದೆ.<br><br>ಗೊಲ್ಲ ಸಮುದಾಯವನ್ನೊಳಗೊಂಡಂತೆ ಹಿಂದುಳಿದ ವರ್ಗದವರ ಅಭಿವೃದ್ಧಿಗಾಗಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ.<br><br>ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ. ಪಿಹೆಚ್ಎಸ್ 262 ಎಸ್ಇಡಬ್ಲ್ಯು 65, ದಿನಾಂಕ: 01-02-1966ರ ಪ್ರಕಾರ ಗುರುತಿಸಿರುವ ಅಲೆಮಾರಿ/ ಅರೆ ಅಲೆಮಾರಿ ಜಾತಿಗಳಲ್ಲಿ ಗೊಲ್ಲ ಜಾತಿಯು ಸೇರಿರುತ್ತದೆ. ಅಲೆಮಾರಿ/ ಅರೆ ಅಲೆಮಾರಿ ಜನಾಂಗದವರ ಅಭಿವೃದ್ಧಿಗಾಗಿ ವಿಶೇಷವಾಗಿಈ ಕೆಳಕಂಡ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗಿರುತ್ತದೆ.<br><br>1) ಮೆಟ್ರಿಕ್-ಪೂರ್ವ ವಿಶೇಷ ಪ್ರೋತ್ಸಾಹಧನ<br>2) ಮೆಟ್ರಿಕ್-ನಂತರ ಅರ್ಹತಾ ವಿದ್ಯಾರ್ಥಿ ವೇತನ<br>3) ಆಶ್ರಮ ಶಾಲೆಗಳ ನಿರ್ವಹಣೆ<br>4) ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ (ಸರ್ಕಾರದ ಆದೇಶ ಸಂಖ್ಯೆ.ಬಿಸಿಡಬ್ಲ್ಯೂ82 ಬಿಎಂಎಸ್ 2019, ದಿನಾಂಕ: 24-10-2019ರಲ್ಲಿ 2020-21ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶವನ್ನು ಸ್ಥಗಿತಗೊಳಿಸಿದ್ದು, ಈಗಾಗಲೇ ಪ್ರವೇಶ ಪಡೆದಿರುವ ನವೀಕರಣ ವಿದ್ಯಾರ್ಥಿಗಳಿಗೆ 10ನೇ ತರಗತಿಯ ವಿದ್ಯಾಭ್ಯಾಸ ಪೂರ್ಣಗೊಳ್ಳುವವರೆಗೆ ವಾರ್ಷಿಕ ಅನುದಾನ ನೀಡಲು ಸಹಮತಿಸಿರುತ್ತದೆ)<br>5) ಮೂಲಭೂತ ಸೌಕರ್ಯಗಳು<br>6) ವಸತಿ ಸೌಲಭ್ಯ<br>7) ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ.<br>8) ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ.<br>9) ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಾತಿ.<br>10) ಅರಿವು ಮೂಡಿಸುವ ಕಾರ್ಯಕ್ರಮ ಸ್ವಯಂ ಉದ್ಯೋಗ ಸಾಲ ಯೋಜನೆ.<br>11) ಗಂಗಾ ಕಲ್ಯಾಣ ನೀರಾವರಿ ಯೋಜನೆ.<br>12) ಅರಿವು ಶೈಕ್ಷಣಿಕ ಸಾಲ ಯೋಜನೆ.<br>13) ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ (ತರಬೇತಿ) ಯೋಜನೆ |

| | | |
|---|---|---|
| ) | ಗೊಲ್ಲ ಸಮುದಾಯಕ್ಕೆ ಎಸ್. ಟಿ ಮೀಸಲಾತಿ ನೀಡಲು ಸರ್ಕಾರ ಕೈಗೊಂಡ ಕ್ರಮವೇನು: ಗೊಲ್ಲ ಸಮುದಾಯದ ವಿದ್ಯಾರ್ಥಿಗಳಿಗೆ ಶಿಕ್ಷಣದಲ್ಲಿ 2012 ರವರೆಗೆ ನೀಡುತ್ತಿದ್ದ ಶುಲ್ಕ ವಿನಾಯಿತಿಯನ್ನು ಯಾವ ಕಾರಣಕ್ಕಾಗಿ ನಿಲ್ಲಿಸಲಾಗಿದೆ: | ಸರ್ಕಾರದ ಆದೇಶ ಸಂಖ್ಯೆ:ಸಕಇ 45 ಎಸ್‌ಎಡಿ 2012 ದಿನಾಂಕ:14/08/2013 ರಲ್ಲಿ ರಾಜ್ಯದಲ್ಲಿನ ಗೊಲ್ಲ, ಗೌಳಿ ಮತ್ತು ಅದರ ಪರ್ಯಾಯ ಪದಗಳ ಬಗ್ಗೆ ದನಗರ ಜನಾಂಗದ ಬಗ್ಗೆ ಕುಲಶಾಸ್ತ್ರೀಯ ಅಧ್ಯಯನವನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ವತಿಯಿಂದ ಕೈಗೊಂಡು ದಿನಾಂಕ:19.03.2019 ರಂದು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದೆ. ಸದರಿ ವರದಿಯಲ್ಲಿನ ಅಂಶಗಳ ಬಗ್ಗೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ಪರಿಶೀಲಿಸಲಾಗುತ್ತಿದೆ. |
| ) | ಗೊಲ್ಲ ಸಮುದಾಯವು ಶೈಕ್ಷಣಿಕವಾಗಿ ಹಿಂದುಳಿದಿದ್ದರೂ ಸಮುದಾಯದ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿಯನ್ನು ನೀಡದಿರಲು ಕಾರಣವೇನು: ಶುಲ್ಕ ವಿನ್ನಾಯಿತಿ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | ಪ್ರತಿ ವರ್ಷವೂ ಗೊಲ್ಲ ಸಮುದಾಯವನ್ನೊಳಗೊಂಡಂತೆ ಅರ್ಜಿಸಲ್ಲಿಸುವ ಎಲ್ಲಾ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೂ ಶುಲ್ಕ ವಿನಾಯಿತಿಯನ್ನು ಆಯಾ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೆ ಒಳಪಟ್ಟು, ಅರ್ಹತೆ ಮತ್ತು ಆದಾಯಕ್ಕೆ(Merit cum Means) ಅನುಗುಣವಾಗಿ ಮಂಜೂರು ಮಾಡಲಾಗುತ್ತಿದೆ.<br><br>2021-22ನೇ ಸಾಲಿನಲ್ಲಿ ಶುಲ್ಕ ಮರುಪಾವತಿ ಕಾರ್ಯಕ್ರಮದಡಿ ಗೊಲ್ಲ ಸಮುದಾಯದ ಮೆಟ್ರಿಕ್ ನಂತರದ ಅರ್ಹ 22559 ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿ ಮಂಜೂರು ಮಾಡಲಾಗಿರುತ್ತದೆ.<br><br>2022-23 ನೇ ಸಾಲಿಗೆ ಶುಲ್ಕ ಮರುಪಾವತಿ ಕಾರ್ಯಕ್ರಮ ಅನುಷ್ಠಾನಗೊಳಿಸಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31.12.2022 ಆಗಿರುತ್ತದೆ. |
| ) | ಈಗಾಗಲೇ ಕಾಡುಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ (ಎಸ್.ಟಿ) ಸೇರಿಸಲು ರಾಜ್ಯ ಸರ್ಕಾರವು ಕೇಂದ್ರಕ್ಕೆ ಶಿಫಾರಸ್ಸು ಮಾಡಿರುವುದು ಸರಿಯಷ್ಟೆ, ಕೇಂದ್ರ ಸರ್ಕಾರದಲ್ಲಿ ಕಾಡುಗೊಲ್ಲರಿಗೆ ಎಸ್.ಟಿ ಸ್ಥಾನಮಾನ ನೀಡಲು ರಾಜ್ಯ ಸರ್ಕಾರ ಶಿಫಾರಸ್ಸು ಮಾಡದಿರಲು ಕಾರಣವೇನು; | ರಾಜ್ಯದಲ್ಲಿನ ಕಾಡುಗೊಲ್ಲ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಮೈಸೂರು ವಿಶ್ವವಿದ್ಯಾಲಯದ ಮೂಲಕ ಕುಲಶಾಸ್ತ್ರೀಯ ಅಧ್ಯಯನ ಕಾರ್ಯಕೈಗೊಂಡು ಅವರು ಸಲ್ಲಿಸಿದ್ದ ಅಂತಿಮ ವರದಿಯನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಿಂದ ದಿನಾಂಕ:16/09/2014 ರಂದು ಸರ್ಕಾರಕ್ಕೆ ಸಲ್ಲಿಸಿದ ಅಂತಿಮ ವರದಿಯನ್ನು ದಿನಾಂಕ:26.12.2014 ರಂದು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.<br><br>ಕಾಡುಗೊಲ್ಲ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ವರದಿ ಕುರಿತಂತೆ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ, ನವದೆಹಲಿರವರು ವ್ಯಕ್ತಪಡಿಸಿದ ಪರಿಶೀಲನಾ ಅಂಶಗಳ ಕುರಿತು ವಿವರವಾದ ಸಮರ್ಥನೆ/ಅಬಿಪ್ರಾಯವನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ಮೈಸೂರು ವಿಶ್ವವಿದ್ಯಾಲಯದಿಂದ ಪಡೆದು, ಕೇಂದ್ರ ಸರ್ಕಾರಕ್ಕೆ ದಿನಾಂಕ:28.09.2018ರಂದು ಸಲ್ಲಿಸಲಾಗಿದೆ.<br><br>ಕಾಡುಗೊಲ್ಲ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ವರದಿ ಕುರಿತಂತೆ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ, ನವದೆಹಲಿರವರು ವ್ಯಕ್ತಪಡಿಸಿದ ಪರಿಶೀಲನಾ ಅಂಶಗಳ ಕುರಿತು ವಿವರವಾದ ಸಮರ್ಥನೆ/ಅಬಿಪ್ರಾಯವನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ಮೈಸೂರು ವಿಶ್ವವಿದ್ಯಾಲಯದಿಂದ ಪಡೆದು, ಕೇಂದ್ರ ಸರ್ಕಾರಕ್ಕೆ ದಿನಾಂಕ:28.09.2018ರಂದು ಸಲ್ಲಿಸಲಾಗಿದೆ. |

| | | |
|---|---|---|
| | | ತದನಂತರವೂ, ಕಾಡುಗೊಲ್ಲ ಸಮುದಾಯದ ಕುಲಶಾಸ್ತ್ರೀಯ ಅಧ್ಯಯನ ವರದಿ ಕುರಿತಂತೆ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ, ನವದೆಹಲಿರವರು ಪುನ: ಒದಗಿಸುವಂತೆ ಕೋರಿರುವ ಹೆಚ್ಚುವರಿ ಪರಿಶೀಲನಾ ಅಂಶಗಳ ಕುರಿತು ವಿವರವಾದ ಹೆಚ್ಚುವರಿ ಮಾಹಿತಿಯನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ಮೂಲಕ ಮೈಸೂರು ವಿಶ್ವವಿದ್ಯಾಲಯದಿಂದ ಪಡೆದು, ಕೇಂದ್ರ ಸರ್ಕಾರಕ್ಕೆ ದಿನಾಂಕ:04.02.2022 ರಂದು ಸಲ್ಲಿಸಲಾಗಿರುತ್ತದೆ. ಪ್ರಸ್ತುತ ಪ್ರಸ್ತಾವನೆಯು ಕೇಂದ್ರ ಸರ್ಕಾರದಲ್ಲಿ ಬಾಕಿ ಇರುತ್ತದೆ. |

**ಸಂಖ್ಯೆ: ಹಿಂವಕ 298 ಬಿಸಿಎ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು